ದಿನಾಂಕ: 08.02.2021 ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ ಶ್ರೀ ಲಿಂಗಣ್ಣ ಗುಂಡಳ್ಳಿ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ನಾಗರಾಜ್. ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
3. ಶ್ರೀ ಶಿವಕುಮಾರ್ , ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ರಾಜಣ್ಣ. ಎ.ಎಸ್.ಐ. ಬಸವೇಶ್ವರನಗರ ಪೋಲಿಸ್ ಠಾಣೆ
5. ಶ್ರೀ ಮಂಜುನಾಥ್, ಸಂಚಾರಿ ಪೋಲಿಸ್ ಕಾನ್ಸ್ ಟೇಬಲ್,
6. ಶ್ರೀ ಲೋಕೇಶ್, ಕಂದಾಯ ಪರಿವೀಕ್ಷಕರು,
7. ಶ್ರೀ ರವಿ, ಕಂದಾಯ ವಸೂಲಿಗಾರರು
8. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ
9. ಶ್ರೀ ನಾಗರಾಜ್, ತೋಟಗಾರಿಕೆ ಇಲಾಖೆ
10. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
11. ಶ್ರೀ ಶರಣಬಸವ, ಮಾರ್ಷಲ್

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ ವಿಜಯಕುಮಾರ್ ಎಂಬುವವರು ಮಾತನಾಡುತ್ತಾ, 12ನೇ ಮುಖ್ಯ ರಸ್ತೆ, ಶಿವನಗರದ ನ್ಯಾಯಾಬೆಲೆ ಅಂಗಡಿ ಹತ್ತಿರ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ನಾಯಿಗಳನ್ನು ಹಿಡಿಯಲು ಕ್ರಮ ವಹಿಸಬೇಕಾಗಿ ಕೋರಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಸಂಬಂಧಪಟ್ಟ ಇಲಾಖೆಯವರಿಗೆ ತಿಳಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.
2. 7ನೇ ಕ್ರಾಸ್ ಮಹಾಗಣಪತಿನಗರ ಇಲ್ಲಿ ಒಂದು ನೀರಿನ ಟ್ಯಾಂಕರ್ ನಿರ್ಮಾಣ ಮಾಡಿಕೊಡಬೇಕೆಂದು ಶ್ರೀ ವೆಂಕಟೇಶ್, ವಾರ್ಡ್ ಕಮಿಟಿ ಸದಸ್ಯರು ಕೋರಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು ಮಾತನಾಡುತ್ತಾ, ಮುಂದಿನ ಕಾಮಗಾರಿಗಳ ಪಟ್ಟಿಯಲ್ಲಿ ಸೇರಿಸಿ, ಟ್ಯಾಂಕ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.
3. ಶ್ರೀ ವಸಂತ್‌ಕುಮಾರ್ ರವರು ಮಾತನಾಡುತ್ತಾ, 9ನೇ ಮುಖ್ಯ ರಸ್ತೆ, ಹಾಗೂ 12ನೇ ಬಿ ಮುಖ್ಯ ರಸ್ತೆ, ಶಿವನಗರ ಇಲ್ಲಿ ಮ್ಯಾನ್ ಹೋಲ್‌ಗಳನ್ನು ದುರಸ್ಥಿಪಡಿಸಬೇಕಾಗಿ ಕೋರಿದೆ. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
4. ಬೀರಂಗಿ ಪಾಳ್ಯ ವ್ಯಾಪ್ತಿಯಲ್ಲಿ ಸೊಳ್ಳೆಗಳು ಜಾಸ್ತಿಯಾಗಿದ್ದು, ಫಾಗಿಂಗ್ ಹಾಗೂ ಸೊಳ್ಳೆ ಔಷಧಿಯನ್ನು ಸಿಂಪಡಿಸಬೇಕಾಗಿ ಶ್ರೀ ವಸಂತ್‌ಕುಮಾರ್ ರವರು ಸಭೆಯಲ್ಲಿ ಕೋರಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಸೊಳ್ಳೆ ಔಷಧಿಯನ್ನು ಸಿಂಪಡಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಪು.ತಿ.ನೋ.

Scanned with CamScanner

5. ಶ್ರೀ ಕೇಶವ ಮೂರ್ತಿ, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಲಾಗಿರುತ್ತದೆ. ಆದರೆ ಇದುವರೆವಿಗೂ ರಸ್ತೆಯನ್ನು ದುರಸ್ಥಿಪಡಿಸಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಈ ವಿಷಯದ ಬಗ್ಗೆ ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ತಿಳಿಸಲು ವಾರ್ಡ್ ಕಾರ್ಯದರ್ಶಿರವರಿಗೆ ಸೂಚಿಸಿದರು.
6. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, 1ನೇ ಮುಖ್ಯ ರಸ್ತೆ, ಮಹಾಗಣಪತಿನಗರ ಇಲ್ಲಿ ದೊಡ್ಡ ಮಳೆನೀರು ಚರಂಡಿ ಇಲಾಖೆ ವತಿಯಿಂದ ಚರಂಡಿಯ ಕಾಮಗಾರಿಯನ್ನು ಪೂರ್ಣಗೊಳಿಸಿ ತುಂಬಾ ದಿನಗಳು ಕಳೆದರು ಸಹ ಸ್ಥಳದಲ್ಲಿರುವ ಮಣ್ಣನ್ನು ಖಾಲಿ ಮಾಡದೆ ಇರುವುದರಿಂದ ಕೂಡಲೇ ಸಂಬಂಧಪಟ್ಟವರಿಗೆ ತೆರವುಗೊಳಿಸುವಂತೆ ತಿಳಿಸಲು ಸಮಿತಿ ಕಾರ್ಯದರ್ಶಿಗೆ ಸೂಚಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು
ವಾರ್ಡ್ ನಂ. 107

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ,-ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ,] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ. ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner